1139 (1233) ಶ್ರೀ ಪ್ರಕಾಶ್ ಖಂಡ್ರೆ (ಭಾಲ್ಕಿ):– ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಭಾಲ್ಕಿ ಪಟ್ಟಣದಲ್ಲಿ 100 ಹಾಸಿಗೆಯುಳ್ಳ ಸರಕಾರಿ ಆಸ್ಪತ್ರೆಯಲ್ಲಿ ನಿಯಮಾನುಸಾರ ಇರಬೇಕಾದ ವೈದ್ಯರು, ನರ್ಸ್ ಹಾಗೂ ಸಿಬ್ಬಂದಿಗಳ ಸಂಖ್ಯೆ ಎಷ್ಟು;

(ಆ) ಸದರಿ ಆಸ್ಪತ್ರೆಯಲ್ಲಿ ಈಗ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು;

(ಇ) ಈ ಆಸ್ಪತ್ರೆಯಲ್ಲಿ ಕೊರತೆಯಿರುವ ವೈದ್ಯರು ನರ್ಸ್ ಹಾಗೂ ಸಿಬ್ಬಂದಿಗಳನ್ನು ನೇಮಕ ಮಾಡಲು ಸರಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಆರ್. ಅಶೋಕ (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

(ಅ) ಭಾಲ್ಕಿ ಪಟ್ಟಣದಲ್ಲಿ 100 ಹಾಸಿಗೆಯುಳ್ಳ ಸರಕಾರಿ ಆಸ್ಪತ್ರೆಯಲ್ಲಿ ನಿಯಮಾನುಸಾರ ಇರಬೇಕಾದ ವೈದ್ಯರ ಸಂಖ್ಯೆ: 12

ಸ್ಟಾಫ್ ನರ್ಸ್ : 20 ಹಾಗೂ ಸಿಬ್ಬಂದಿಗಳ ಸಂಖ್ಯೆ : 53

(ಆ) ಸದರಿ ಆಸ್ಪತ್ರೆಯಲ್ಲಿ ಈಗ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ : 36

ಹುದ್ದೆಗಳು	ಸಂಖ್ಯೆ
ವೈದ್ಯರು	6
ಕಛೇರಿ ಅಧೀಕ್ಷಕರು	1
ದ್ವಿ.ದ.ಸ.	3
ಪ್ರ.ದ.ಸ.	0
ಹಿರಿಯ ಪ್ರಯೋಗ ಶಾಲಾ ತಂತ್ರಜ್ಞರು	1
ಕಿರಿಯ ಪ್ರಯೋಗ ಶಾಲಾ ತಂತ್ರಜ್ಞರು	2
ಕ್ಷ–ಕಿರಣ ತಂತ್ರಜ್ಞರು	2
ಕಿ.ಅ.ಸಹಾಯಕಿ	2
ಕಿ.ಅ.ಸಹಾಯಕ	1
ಜೂನಿಯರ್ ಎನ್.ಎಮ್.ಎಸ್	1
ಸ್ಟಾಫ್ ನರ್ಸ್	3
ಗ್ರೂಪ್ ಡಿ. ನೌಕರರು	14

ಇ) ಈ ಖಾಲಿ ಇರುವ ಹುದ್ದೆಗಳಲ್ಲಿ ವಿಶೇಷ ನೇರ ನೇಮಕಾತಿ ಮುಖಾಂತರ 500 ವೈದ್ಯಾಧಿಕಾರಿಗಳ ಹುದ್ದೆ ಭರ್ತಿ ಮಾಡಲು ಸರ್ಕಾರದ ಅನುಮತಿ ನೀಡಿದ್ದು, ಮೊದಲನೇ ಹಂತದಲ್ಲಿ 250 ವೈದ್ಯಾಧಿಕಾರಿಗಳನ್ನು ಆಯ್ಕೆ ಮಾಡಲಾಗಿದೆ. 2ನೇ ಹಂತದಲ್ಲಿ 250 ವೈದ್ಯಾಧಿಕಾರಿಗಳ ಹುದ್ದೆಗಳನ್ನು ಭರ್ತಿಮಾಡಲು ಸಂದರ್ಶನಗಳನ್ನು ನಡೆಸಲಾಗಿದ್ದು ನೇಮಕಾತಿ ಪ್ರಕ್ರಿಯೆ ಅಂತಿಮ ಹಂತದಲ್ಲಿರುತ್ತದೆ. ಹಾಗೂ ವಿಶೇಷ ನೇರ ನೇಮಕಾತಿ ಮುಖಾಂತರ 2807 ಅರೆವೈದ್ಯಕೀಯ ಹುದ್ದೆಗಳನ್ನು ಭರ್ತಿಮಾಡಲು ನೇಮಕಾತಿ ಪ್ರಕ್ರಿಯೆ ಅಂತಿಮ ಹಂತದಲ್ಲಿರುತ್ತದೆ.

ಖಾಲಿ ಇರುವ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲು ಆಯಾ ಆಯಾ ಜಿಲ್ಲಾಧಿಕಾರಿಗಳಿಗೆ ಅಧಿಕಾರ ನೀಡಲಾಗಿದೆ. ಮತ್ತು ಎಂ.ಬಿ.ಬಿ.ಎಸ್ ವೈದ್ಯರು ಇಲ್ಲದ ಕಡೆ ಆಯುಷ ವೈದ್ಯರನ್ನು ನೇಮಕ ಮಾಡಲಾಗುತ್ತಿದೆ.

ಭಾಲ್ಕಿ ತಾಲ್ಲೂಕಿಗೆ ಮೊರಾರ್ಜಿ ವಸತಿ ಶಾಲೆ ಮಂಜೂರು ಮಾಡುವುದು

1140 (1234) ಶ್ರೀ ಪ್ರಕಾಶ್ ಖಂಡ್ರೆ (ಭಾಲ್ಕಿ):– ಮಾನ್ಯ ಸಮಾಜ ಕಲ್ಯಾಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಭಾಲ್ಕಿ ತಾಲ್ಲೂಕಿಗೆ ಮೊರಾರ್ಜಿ ವಸತಿ ಶಾಲೆಯನ್ನು ಮಂಜೂರು ಮಾಡಲು ಸರ್ಕಾರ ಉದ್ದೇಶಿಸಿದೆಯೇ;

(ಆ) ಬೀದರ್ ಜಿಲ್ಲೆಯ ಪ್ರತಿ ತಾಲ್ಲೂಕಿನಲ್ಲಿ ಮೊರಾರ್ಜಿ ವಸತಿ ಶಾಲೆಯನ್ನು ನಡೆಸುತ್ತಿರುವುದು ಸರಕಾರದ ಗಮನಕ್ಕೆ ಬಂದಿದೆಯೇ;

(ಇ) ಹಾಗಿದ್ದಲ್ಲಿ, ಭಾಲ್ಕಿ ತಾಲ್ಲೂಕಿಗೆ ಈವರೆಗೆ ಮೊರಾರ್ಜಿ ವಸತಿ ಶಾಲೆಯನ್ನು ಮಂಜೂರು ಮಾಡದಿರಲು ಕಾರಣವೇನು;

(ಈ) ಇನ್ನು ಮುಂದಾದರೂ ಮಂಜೂರು ಮಾಡಲು ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಬಾಲಚಂದ್ರ ಲ. ಜಾರಕಿಹೊಳಿ (ಮಾನ್ಯ ಸಮಾಜ ಕಲ್ಯಾಣ ಸಚಿವರು)

(ಅ) ಬೇಡಿಕೆ, ವಿದ್ಯಾರ್ಥಿಗಳ ಲಭ್ಯತೆ, ಅಗತ್ಯತೆ, ಆಯವ್ಯಯದಲ್ಲಿ ಹಣಕಾಸಿನ ಲಭ್ಯತೆ ಹಿನ್ನೆಲೆಯಲ್ಲಿ ಪರಿಶೀಲಿಸಿ ತೀರ್ಮಾನಿಸಬೇಕಾಗಿರುತ್ತದೆ.

(ಆ) ಹೌದು.

(ಇ), (ಈ) ಬೇಡಿಕೆ, ವಿದ್ಯಾರ್ಥಿಗಳ ಲಭ್ಯತೆ, ಅಗತ್ಯತೆ, ಆಯವ್ಯಯದಲ್ಲಿ ಹಣಕಾಸಿನ ಲಭ್ಯತೆ ಹಿನ್ನೆಲೆಯಲ್ಲಿ ಪರಿಶೀಲಿಸಿ ತೀರ್ಮಾನಿಸಬೇಕಾಗಿರುತ್ತದೆ.

ಹೊಸದಾಗಿ ಹಾಸ್ಟೆಲ್‌ಗಳನ್ನು ಪ್ರಾರಂಭಿಸುವುದು

1141 (1508) ಶ್ರೀ ಸಿ.ಟಿ. ರವಿ(ಚಿಕ್ಕಮಗಳೂರು):– ಮಾನ್ಯ ಸಮಾಜ ಕಲ್ಯಾಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–